1. ಕರ್ನಾಟಕ ರಾಜ್ಯದ ತಾಲ್ಲೂಕು ಪಂಚಾಯತಿಗಳ 2010–11ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಕ್ರೋಢೀಕೃತ ಪ್ರತ್ಯೇಕ ಆಡಿಟ್ ವರದಿ

V. **ಶ್ರೀ ವಿ.ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು.) ಮಾನ್ಯ ಅಧ್ಯಕ್ಷರೆ, ನನ್ನ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.The Karnataka Improvement Boards (Amendment) Act,**1985 **ಸೆಕ್ಷನ್ 12–ಜಿ(5)**ರ ಮೇರೆಗೆ:

1. ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ 2011–12ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

ಅಧ್ಯಕ್ಷರು : ಮಂಡಿಸಲಾಗಿದೆ.

x x x

ಅಧ್ಯಕ್ಷರು : ಈಗ ಮಾನ್ಯ ತೋಟಗಾರಿಕೆ ಸಚಿವರು ಸದನದಲ್ಲಿ ಒಂದು ಹೇಳಿಕೆಯನ್ನು ನೀಡುತ್ತಾರೆ.

4. ಮಾನ್ಯ ತೋಟಗಾರಿಕೆ ಸಚಿವರಿಂದ ಹೇಳಿಕೆ

ವಿಷಯ : ಉಂಡೆ ಕೊಬ್ಬರಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹಧನ ನೀಡುವ ಬಗ್ಗೆ.

ಶ್ರೀ ಶ್ಯಾಮನೂರು ಶಿವಶಂಕರಪ್ಪ (ತೋಟಗಾರಿಕೆ ಸಚಿವರು) : ಮಾನ್ಯ ಅಧ್ಯಕ್ಷರೆ, ಮೊನ್ನೆ ನಡೆದಂತಹ ಸಭೆಯಲ್ಲಿ ಉಂಡೆ ಕೊಬ್ಬರಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹ ಧನ ನೀಡಬೇಕೆನ್ನುವ ವಿಷಯ ಬಂದಾಗ ಅದರ ಬಗ್ಗೆ ಉತ್ತರ ಕೊಡುತ್ತೇನೆಂದು ತಿಳಿಸಿದ್ದೆನು. ಹಾಗಾಗಿ ಈ ದಿವಸ ಅಂದರೆ ದಿನಾಂಕ: 12.06.2013ರಂದು ಬೆಳಿಗ್ಗೆ 9.30 ಗಂಟೆಗೆ ಸಚಿವ ಸಂಪುಟ ಉಪಸಮಿತಿ ಸಭೆ ನಡೆಸಿ ಈ ಕೆಳಕಂಡಂಥ ನಿರ್ಣಯಗಳನ್ನು ಕೈಗೊಂಡಿರುತ್ತೇವೆಂದು ನಮ್ಮ ಮಾನ್ಯ ಸದಸ್ಯರುಗಳಿಗೆ ತಿಳಿಸುವುದಕ್ಕೆ ಸಂತೋಷಿಸುತ್ತೇನೆ. ಉಂಡೆ ಕೊಬ್ಬರಿಗೆ ಪ್ರತಿ ಕ್ವಿಂಟಾಲ್‌ಗೆ ಒಂದು ಸಾವಿರ ರೂಪಾಯಿ ರಾಜ್ಯ ಸರ್ಕಾರದಿಂದ ಪ್ರೋತ್ಸಾಹ ಧನವನ್ನಾಗಿ ನೀಡಲು ನಿರ್ಧರಿಸಲಾಗಿದೆ ಹಾಗೂ ಕೇಂದ್ರ ಸರ್ಕಾರದ ಬೆಂಬಲ ಬೆಲೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ 5,500 ರೂಪಾಯಿಗಳು ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಒಂದು ಸಾವಿರ ರೂಪಾಯಿ ಸೇರಿದಂತೆ ಪ್ರತಿ ಕ್ವಿಂಟಾಲ್‌ಗೆ ಉಂಡೆ

ಕೊಬ್ಬರಿಗೆ ಒಟ್ಟು 6,500 ರೂಪಾಯಿಯಂತೆ ರೈತರಿಗೆ ನೀಡಲಾಗುವುದು. ರೈತರಿಂದ ಖರೀದಿಸಲಾಗುವ ಉಂಡೆ ಕೊಬ್ಬರಿಗೆ ಬೆಂಬಲ ಬೆಲೆ ಹಾಗೂ ಪ್ರೋತ್ಸಾಹಧನ ಸೇರಿದಂತೆ ಹಣವನ್ನು ತಕ್ಷಣವೇ ಆ ವರ್ತನಿಧಿಯಿಂದ ಪಾವತಿ ಮಾಡಲಾಗುವುದು. ಅವಶ್ಯಕತೆಗೆ ತಕ್ಕಂತೆ ಖರೀದಿ ಕೇಂದ್ರಗಳನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ತೆರೆಯಲಾಗುವುದೆಂದು ತಿಳಿಸುವುದಕ್ಕೆ ಸಂತೋಷಪಡುತ್ತೇನೆ.

ಅಧ್ಯಕ್ಷರು : ಈಗ ಶಾಸನ ರಚನೆ ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು.

5. <u>ಶಾಸನ ರಚನೆ</u>

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು ಕರ್ನಾಟಕ ಪಂಚಾಯತ್ ರಾಜ್(ತಿದ್ದುಪಡಿ) ವಿಧೇಯಕ 2013

ಶ್ರೀ ಹೆಚ್.ಕೆ.ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

<u>ಪ್ರಸ್ತಾವವನ್ನು ಮಂಡಿಸಲಾಯಿತು</u>

ಶ್ರೀ ಹೆಚ್.ಕೆ.ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಪಂಚಾಯತ್ (ತಿದ್ದುಪಡಿ) ವಿಧೇಯಕ 2013, ಇದೊಂದು ಅತ್ಯಂತ ಸರಳವಾದ ಹಾಗೂ ನಮ್ಮ ಗ್ರಾಮ ಪಂಚಾಯಿತಿಗಳನ್ನು ಹೆಚ್ಚು ಅರ್ಥಪೂರ್ಣವಾಗಿ ಮಾಡಬೇಕು, ಗ್ರಾಮ ಸಭೆಗಳಿಗೆ ಹೆಚ್ಚು ಮಹತ್ವ ಇರಬೇಕು, ಗ್ರಾಮ ಸಭೆಗಳು ಶಾಸನದ ಮುಖಾಂತರ, ಸಂವಿಧಾನದ ಮುಖಾಂತರ ನಾವು ಸಾಕಷ್ಟು ಒತ್ತು ಕೊಟ್ಟು ಅವುಗಳಿಗೆ ಮಹತ್ವ ನೀಡಿದ್ದರೂ ಸಹ ಹಲವಾರು ಕಾರಣಗಳಿಂದ ಹಾಗೂ ಕೆಲವು ಬೇಜವಾಬ್ದಾರಿ ವ್ಯಕ್ತಿಗಳಿಂದಾಗಿ ನಮ್ಮ ಉದ್ದೇಶವೇ ಸಫಲವಾಗದ ಹಾಗೆ ಈ ವ್ಯವಸ್ಥೆಯನ್ನು ತಿರುಚುವಂತಹ ಪ್ರಯತ್ನ ಮಾಡುವವರಿದ್ದಾರೆನ್ನುವುದು ನಮಗೆಲ್ಲರಿಗೂ ಕೂಡ ತಿಳಿದಿರುವಂತಹ ಸಂಗತಿ. ಆ ಹಿನ್ನೆಲೆಯೊಳಗೆ ಶಾಸನ ಸಭೆಯಲ್ಲಾಗಲಿ, ಹೊರಗಾಗಲಿ ಗ್ರಾಮ ಸಭೆಯ ಮಹತ್ವವನ್ನು ಸಾಕಷ್ಟು ಒತ್ತಿ ಹೇಳಿ, ಇವತ್ತು